ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1490 (1779)

2) ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ : 23.03.2020.

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದ ಬಂಡೀಪುರ ಅಭಯಾರಣ್ಯದ 5 ಭಾಗಗಳಲ್ಲಿ ಎಲಿವೇಟೆಡ್ ರಸ್ತೆ ನಿರ್ಮಾಣದ ಬಗ್ಗೆ ಸರ್ಕಾರದ ನಿಲುವೇನು;	ಇಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
ಆ)	ಎಲಿವೇಟೆಡ್ ರಸ್ತೆ ನಿರ್ಮಾಣ ಮಾಡಿದಲ್ಲಿ ಈಗ ಇರುವ ರಾತ್ರಿ ಸಂಚಾರ ನಿಷೇಧವನ್ನು ತೆರವುಗೊಳಿಸಲಾಗುವುದೇ;	ಬಂಡೀಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾತ್ರಿ ವೇಳೆ ವಾಹನಗಳ ಸಂಚಾರವನ್ನು ನಿಷೇಧಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇರುತ್ತದೆ. ಆದ್ದರಿಂದ, ರಾತ್ರಿ ಸಂಚಾರವನ್ನು ನಿಷೇಧಿಸಿರುವುದನ್ನು ತೆರವುಗೊಳಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.
ಇ)	ಬಂಡೀಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾತ್ರಿ ವೇಳೆ ವಾಹನ ಸಂಚಾರ ಮರು ಆರಂಭಕ್ಕೆ ಕೇರಳ ಸರ್ಕಾರ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದು, ಈ ಕುರಿತು ಸರ್ಕಾರ ಯಾವ ತೀರ್ಮಾನ ಕೈಗೊಂಡಿದೆ?	ಬಂಡೀಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾತ್ರಿ ವೇಳೆ ವಾಹನಗಳ ಸಂಚಾರ ನಿಷೇಧಿಸಿರುವುದನ್ನು ಯಥಾಸ್ಥಿತಿಯಲ್ಲಿ ಮುಂದುವರಿಸುವಂತೆ ಕೋರಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ಸಲ್ಲಿಸಲಾಗಿದೆ.

ಸಂಖ್ಯೆ: ಅಪಜೀ 79 ಎಫ್ ಡಬ್ಲ್ಯೂ ಎಲ್ 2020

21/03/2020

(ಆನಂದ್ ಸಿಂಗ್)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು